ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಹೆಚ್ಚುವರಿ ಮಂಜೂರಾಗಿರುವ CL – 2 ಸನ್ನದು ರದ್ದು ವಿಳಂಬವಾಗುತ್ತಿರುವ ಬಗ್ಗೆ

ಶ್ರೀ ಕೆ. ಗೋವಿಂದರಾಜ್(ವಿಧಾನಸಭೆಯಿಂದ ಚುನಾಯಿತರಾದವರು) –

450 (606) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ CL – 2, CL – 4, CL – 7 ಕೋಟಾದಡಿ ಮಂಜೂರಾಗಿರುವ ವೈನ್ ಶಾಪ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) CL – 2 ಕೋಟಾದಡಿ ನಿಗದಿಗಿಂತ ಹೆಚ್ಚುವರಿಯಾಗಿ ವೈನ್ ಶಾಪ್ ತೆರೆಯಲು ಮಂಜೂರಾತಿ ನೀಡಲಾಗಿರುವುದು ನಿಜವೇ; ಹಾಗಿದ್ದಲ್ಲಿ, ಹೆಚ್ಚುವರಿ ವೈನ್ ಶಾಪ್‌ಗಳ ಮಂಜೂರಾತಿ ರದ್ದುಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ಏನು;

(ಇ) CL – 2 ಕೋಟಾದಡಿ ಹೆಚ್ಚುವರಿ ಮಂಜೂರು ಆಗಿರುವ ವೈನ್ ಶಾಪ್‌ಗಳನ್ನು ರದ್ದುಪಡಿಸುವಂತೆ ರಾಜ್ಯ ಉಚ್ಛ ನ್ಯಾಯಾಲಯ ಆದೇಶಿಸಿರುವುದು ನಿಜವೇ; ಹಾಗಿದ್ದಲ್ಲಿ, ನ್ಯಾಯಾಲಯದ ಆದೇಶ ಪಾಲಿಸದೇ ಇನ್ನೂ ತೆರೆದಿರುವ ಹೆಚ್ಚುವರಿ ಮಂಜೂರಾದ ವೈನ್ ಶಾಪ್‌ಗಳನ್ನು ಮುಚ್ಚಿಸುವಲ್ಲಿ ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಪೂರ್ಣ ಮಾಹಿತಿ ಒದಗಿಸುವುದು?